**All India Radio: Bangalore**
**Regional Bulletin In Kannada**
**10.05.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ರಾಷ್ಟ್ರೀಯ ಗುರಿಗಳ ಸಾಧನೆಗೆ ಧಾರ್ಮಿಕ ಕೇಂದ್ರಗಳ ಬೆಂಬಲ ಅಗತ್ಯ - ಪ್ರಧಾನಿ ನರೇಂದ್ರ ಮೋದಿ
2. ವಿವಿಧ ರಾಜ್ಯಗಳ ಚುನಾವಣೆಯಲ್ಲಿ ಗೆಲುವು ; ರಾಷ್ಟ್ರೀಯ ನೀತಿಗಳಿಗೆ ದೊರೆತ ಜನಬೆಂಬಲದ ಪ್ರತೀಕ - ಪ್ರಧಾನಿ ಅಭಿಮತ
3. ಸಚಿವ ಡಿ.ಸುಧಾಕರ್ ನಿಧನ ; ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ಗಣ್ಯರಿಂದ ಸಂತಾಪ
4. ನಾಡಿನಾದ್ಯಂತ 'ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ

<><><><>

ಒಂಭತ್ತು ರಾಷ್ಟ್ರೀಯ ಕಲ್ಯಾಣ ಗುರಿಗಳ ಸಾಧನೆಗಾಗಿ ಆರ್ಟ್ ಆಫ್ ಲಿವಿಂಗ್‌ನಂತಹ ಧಾರ್ಮಿಕ ಕೇಂದ್ರಗಳ ಬೆಂಬಲವನ್ನು ಪ್ರಧಾನಿ ನರೇಂದ್ರ ಮೋದಿ ಬಯಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಆರ್ಟ್ ಆಫ್ ಲಿವಿಂಗ್‌ನ ೪೫ನೇ ವಾರ್ಷಿಕೋತ್ಸವದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿದರು. ನಂತರ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನೂತನವಾಗಿ ನಿರ್ಮಿಸಲಾದ ಧ್ಯಾನ ಮಂದಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂತಹ ಕೇಂದ್ರಗಳು ಸಾವಯವ ಕೃಷಿಗೆ ಉತ್ತೇಜನ ನೀಡಿ, ಭೂಮಿ ನಾಶಕ್ಕೆ ಕಾರಣವಾಗುವ ರಾಸಾಯನಿಕ ಗೊಬ್ಬರಗಳ ಬಳಕೆಯ ಅನಾನುಕೂಲತೆಯನ್ನು ತಿಳಿಸುವ ಮೂಲಕ ಜನರಲ್ಲಿ ಅರಿವು ಮೂಡಿಸುತ್ತಿದೆ ಎಂದರು. ನೀರಿನ ಸಂರಕ್ಷಣೆ, ಇಂಧನ ಉಳಿತಾಯ, ಪ್ಲಾಸ್ಟಿಕ್ ಬಳಕೆ ದುಷ್ಪರಿಣಾಮ ಕುರಿತು ಜನರಲ್ಲಿ ಅರಿವು ಮೂಡಿಸುವಲ್ಲಿ ಈ ಕೇಂದ್ರಗಳು ಪ್ರಮುಖ ಪಾತ್ರವಹಿಸಿವೆ ಎಂದು ಅವರು ಇದೇ ವೇಳೆ ತಿಳಿಸಿದರು. ಯೋಗ, ಧ್ಯಾನ, ಪ್ರಾಣಯಾಮ ನಮ್ಮ ಪಾರಂಪರಿಕ, ಆಧ್ಯಾತ್ಮಿಕ ಭಾಗವಾಗಿದ್ದು, ನಮ್ಮ ದೇಶದ ಪ್ರಗತಿಯಲ್ಲಿ ಯುವಜನತೆ ಪಾತ್ರವನ್ನು ರೂಪಿಸುವಲ್ಲಿ ಮಹತ್ವದ್ದಾಗಿವೆ ಎಂದು ಹೇಳಿದ್ದಾರೆ. ಸ್ವಚ್ಛತಾ ಅಭಿಯಾನ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಾಮಾಜಿಕ ಅರಿವು ಮೂಡಿಸುವಲ್ಲಿ ನೆರವಾಗಿದೆ. ಡಿಜಿಟಲ್ ಪಾವತಿಯಲ್ಲಿ ಭಾರತ ಪ್ರಸ್ತುತ ಜಾಗತಿಕ ನಾಯಕನಾಗಿದ್ದು, ನವೋದ್ಯಮದಲ್ಲಿ ಮೂರನೇ ಅತಿದೊಡ್ಡ ರಾಷ್ಟ್ರವಾಗಿದೆ ಎಂದು ತಿಳಿಸಿದರು.

ರಾಷ್ಟ್ರೀಯ ಗುರಿಗಳು ಮತ್ತು ಜವಾಬ್ದಾರಿಗಳನ್ನು ಸಮಾಜ ಅರಿತಾಗ ವಿಕಸಿತ ಭಾರತ ಸಂಕಲ್ಪ ಸಾಕಾರಗೊಳ್ಳುವಲ್ಲಿ ಸಾಧ್ಯ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ.

<><><><>

ಇತ್ತೀಚೆಗೆ ನಡೆದ ನಾಲ್ಕು ರಾಜ್ಯ ಹಾಗೂ ಒಂದು ಕೇಂದ್ರಾಡಳಿತ ಪ್ರದೇಶದ ಚುನಾವಣೆ ಫಲಿತಾಂಶ ಕೇಂದ್ರ ಸರ್ಕಾರದ ರಾಷ್ಟ್ರೀಯ ನೀತಿಗಳಿಗೆ ದೊರೆತ ಜನಬೆಂಬಲದ ಪ್ರತೀಕವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ. ಬೆಂಗಳೂರಿನ ವಿಮಾನ ನಿಲ್ದಾಣದಲ್ಲಿಂದು ಪಕ್ಷದ ಕಾರ್ಯಕರ್ತರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿಯಲ್ಲಿ ಬಿಜೆಪಿ ಗೆಲುವು ಕೇಂದ್ರ ಸರ್ಕಾರದಿಂದ ಅನುಷ್ಠಾನಗೊಂಡಿರುವ ರಾಷ್ಟ್ರೀಯ ನೀತಿಗಳಿಗೆ ದೊರೆತ ಜನಬೆಂಬಲದ ಪ್ರತಿಬಿಂಬವಾಗಿದೆ ಎಂದರು. ಚುನಾವಣಾ ಫಲಿತಾಂಶ ಕೇಂದ್ರ ಸರ್ಕಾರದ ಯೋಜನೆಗಳು ಮತ್ತು ನೀತಿಗಳಿಗೆ ಜನರು ನೀಡಿರುವ ಸಂದೇಶವಾಗಿದೆ. ಉತ್ತಮ ಆಡಳಿತ, ಸಮಸ್ಯೆಗಳಿಗೆ ತ್ವರಿತಗತಿಯಲ್ಲಿ ಸ್ಪಂದಿಸುವ ಮೂಲಕ ದೇಶವನ್ನು ಪ್ರಗತಿಪಥದಲ್ಲಿ ಕೊಂಡಯ್ಯುವ ಅಗತ್ಯವಿದೆ ಎಂದು ಪ್ರತಿಪಾದಿಸಿದರು. ಪಶ್ಚಿಮ ಬಂಗಾಳದಲ್ಲಿ ಕೇವಲ ಮೂರು ಸ್ಥಾನಗಳೊಂದಿಗೆ ಅಸ್ತಿತ್ವ ಆರಂಭಿಸಿದ ಬಿಜೆಪಿ ೧೦ ವರ್ಷಗಳ ನಂತರ ಬೃಹತ್ ಜನಾದೇಶ ಪಡೆದಿದೆ. ಅಸ್ಸಾಂನಲ್ಲಿ ಮೂರನೇ ಬಾರಿಗೆ ಜನರು ಪಕ್ಷಕ್ಕೆ ಅಧಿಕಾರ ನೀಡಿದ್ದಾರೆ. ಗುಜರಾತ್ ನಗರ ಪಾಲಿಕೆ ಚುನಾವಣೆಯಲ್ಲಿ

ಪಕ್ಷ ಎಲ್ಲಾ ದಾಖಲೆಗಳನ್ನು ಮುರಿದಿದೆ. ಕೇರಳದಲ್ಲಿ ಮೂರು ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಮುಂದಿನ ದಿನಗಳಲ್ಲಿ ಪಕ್ಷ ಮತ್ತಷ್ಟು ಬಲವರ್ಧನೆಯಾಗಲಿದೆ ಎಂದರು. ಲೋಕಸಭೆ ಹಾಗೂ ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡ ೩೩ ರಷ್ಟು ಮೀಸಲಾತಿ ಒದಗಿಸುವ ನಾರಿ ವಂಧನ್ ಅಧಿನಿಯಮ ಮಸೂದೆಗೆ ಕಾಂಗ್ರೆಸ್ ವಿರೋಧಿಸುವ ಮೂಲಕ ಮಹಿಳೆಯರಿಗೆ ದ್ರೋಹ ಬಗೆದಿದೆ ಎಂದು ಆರೋಪಿಸಿದರು.

<><><><>

ರಾಜ್ಯದ ಯೋಜನೆ ಮತ್ತು ಸಾಂಖಿಕ ಇಲಾಖೆ ಸಚಿವ ಡಿ. ಸುಧಾಕರ್ ಅವರು ಇಂದು ನಿಧನರಾಗಿದ್ದಾರೆ. ಕಳೆದ ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಸಚಿವ ಡಿ. ಸುಧಾಕರ್ ಅವರು ಬೆಂಗಳೂರಿನ ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಆದರೆ ಚಿಕಿತ್ಸೆ ಫಲಿಸದೆ ಇಂದು ನಿಧನರಾಗಿದ್ದಾರೆ. ಸಚಿವ ಡಿ. ಸುಧಾಕರ್ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಸದಾಶಿವನಗರದಲ್ಲಿರುವ ನಿವಾಸದಲ್ಲಿ ಸಚಿವ ಸುಧಾಕರ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದು ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸುಧಾಕರ್ ಅವರ ಅಗಲಿಕೆಯಿಂದ ರಾಜಕೀಯ ಕ್ಷೇತ್ರಕ್ಕೆ ದೊಡ್ಡ ನಷ್ಟವುಂಟಾಗಿದೆ ಎಂದರು. ಚಿತ್ರದುರ್ಗ ಜಿಲ್ಲೆಯಲ್ಲಿ ಮೂರು ದಿನಗಳ ಕಾಲ ಶೋಕಾಚರಣೆ ಮಾಡುತ್ತಿದ್ದು, ಸೋಮವಾರ ರಜೆ ಘೋಷಣೆ ಮಾಡಲಾಗಿದೆ ನಾಳೆ ಚಳ್ಳಕೆರೆಯಲ್ಲಿ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ ಎಂದರು.

<><><><>

ಡಿ.ಸುಧಾಕರ್ ಅವರು ೪ ಬಾರಿ ವಿಧಾನಸಭಾ ಸದಸ್ಯರಾಗಿ, ಸಮಾಜ ಕಲ್ಯಾಣ ಸಚಿವರಾಗಿ ಹಾಗೂ ವಿವಿಧ ಪ್ರಮುಖ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದ, ಸರಳ ವ್ಯಕ್ತಿತ್ವ ಮತ್ತು ಜನಪರ ಕಾರ್ಯಗಳಿಂದ ಅವರು ಜನಮನದಲ್ಲಿ ವಿಶೇಷ ಸ್ಥಾನ ಪಡೆದಿದ್ದರು. ಅವರ ಅಗಲಿಕೆ ರಾಜ್ಯಕ್ಕೆ ಮತ್ತು ಹಿರಿಯೂರು ಕ್ಷೇತ್ರದ ಜನತೆಗೆ ತುಂಬಲಾರದ ನಷ್ಟವಾಗಿದೆ ಎಂದು ವಿಧಾನ ಸಭೆಯ ಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ. ಸಚಿವ ಡಿ.ಸುಧಾಕರ್ ಅವರ ನಿಧನಕ್ಕೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

<><><><>

ನಾಡಿನಾದ್ಯಂತ ಇಂದು 'ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ'ಯನ್ನು ಆಚರಿಸಲಾಗುತ್ತಿದೆ. ದಾವಣಗೆರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಹೇಮರೆಡ್ಡಿ ಮಲ್ಲಮ್ಮನವರ ಭಾವಚಿತ್ರಕ್ಕೆ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಪುಷ್ಪಾರ್ಚನೆ ಮಾಡಿದರು. ಇದಕ್ಕೂ ಮುನ್ನಾ ಸಚಿವ ಡಿ. ಸುಧಾಕರ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿಧೆಡೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಿಸಲಾಯಿತು. ದೊಡ್ಡಬಳ್ಳಾಪುರದ ತಾಲೂಕು ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಶಾಸಕ ಧೀರಜ್ ಮುನಿರಾಜು, ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತಮ್ಮ ಕಾಯಕದ ಮೂಲಕ ಜನಾನುರಾಗಿಯಾಗಿ, ಮಹಿಳೆಯರಿಗೆ ಆದರ್ಶವಾಗಿದ್ದರು ಎಂದು ಸ್ಮರಿಸಿದರು.

<><><><>

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ ರಾವ್ ಅವರು ಇಂದು ಬೆಂಗಳೂರು ಉತ್ತರ ನಗರ ಪಾಲಿಕೆ ಆಯುಕ್ತರಾದ ಪೊಮ್ಮಲ ಸುನೀಲ್ ಕುಮಾರ್ ಅವರೊಂದಿಗೆ ಪಾಲಿಕೆ ವ್ಯಾಪ್ತಿಯ ವಿವಿಧ ವಾರ್ಡ್‌ಗಳಲ್ಲಿ ಪರಿಶೀಲನೆ ನಡೆಸಿದರು. ಜಕ್ಕೂರು ರೈಲ್ವೆ ಸಮಾನಾಂತರ ರಸ್ತೆಯ ಬದಿಯಲ್ಲಿ ಅನಧಿಕೃತವಾಗಿ ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಮಾಡುತ್ತಿರುವವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಸೂಚಿಸಿದರು. ಅನಧಿಕೃತವಾಗಿ ಪಾದಚಾರಿ ಮಾರ್ಗ ಒತ್ತುವರಿ ಮಾಡಿಕೊಂಡು ಕಟ್ಟಡ ನಿರ್ಮಾಣ ಹಾಗೂ ವ್ಯಾಪಾರ ವಹಿವಾಟು ನಡೆಸುತ್ತಿರುವ ಅಂಗಡಿ ಮಾಲೀಕರಿಗೆ ನೋಟಿಸ್ ನೀಡುವಂತೆ ಸ್ಥಳದಲ್ಲಿದ್ದ ಅಭಿಯಂತರರಿಗೆ ನಿರ್ದೇಶನ ನೀಡಿದರು.

<><><><>

ಬೇಸಿಗೆಯಲ್ಲಿ ನೀರಿನ ಮಿತ ಬಳಕೆ ಬಹಳ ಮುಖ್ಯವಾದದ್ದು ಎಂದು ಕೋಲಾರ ಜಿಲ್ಲೆಯ ನರಸಾಪುರ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮುನಿರಾಜು ತಿಳಿಸಿದ್ದಾರೆ. ಗ್ರಾಮ ಪಂಚಾಯಿತಿಯಲ್ಲಿ ಸಾರ್ವಜನಿಕರ ಸಮ್ಮುಖ ನಡೆದ ಕುಡಿಯುವ ನೀರಿನ ಅದಾಲತ್‌ನಲ್ಲಿ ಮಾತಾನಾಡಿದ ಅವರು, ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ೧೨ ಕೊಳವೆ ಬಾವಿಗಳಿದ್ದು ಶುದ್ದ ನೀರಿನ ಕುಡಿಯುವ ನೀರಿಗೆ ತೊಂದರೆಯಾಗದಂತೆ ಜನರಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದು ಹೇಳಿದರು. ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುಂಜಾಗ್ರತ ಕ್ರಮ ಕೈಗೊಳ್ಳಲಾಗಿದೆ. ನೀರನ್ನು ಕುಡಿಯುವುದಕ್ಕೆ ಬಿಟ್ಟು ಇತರೆ ಗೃಹ ಬಳಕೆಯ ಅಗತ್ಯಗಳಿಗೆ ಮಿತವಾಗಿ ಬಳಸಬೇಕೆಂದು ತಿಳಿಸಿದರು.

<><><><>

ಮುಂಗಾರು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕೆಯಾಗಿ ಕೊಡಗು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಂದುಮಣಿ ಅವರು ಪೊಲೀಸ್ ಇಲಾಖೆ ಅಧಿಕಾರಿಗಳು, ವಿಪತ್ತು ನಿಯಂತ್ರಣ ಕೇಂದ್ರದ ಸಿಬ್ಬಂದಿಗಳು ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿಗಳೊಂದಿಗೆ ಸಭೆ ನಡೆಸಿದರು. ವಿಕೋಪ ಸಂಭವಿಸಿದ ಸಂದರ್ಭ ಜನರ ಸಮಸ್ಯೆಗಳಿಗೆ ತುರ್ತು ಸ್ಪಂದಿಸಬೇಕು. ಇಲಾಖೆಗಳು ಪರಸ್ಪರ ಸಮನ್ವಯ ಸಾಧಿಸಬೇಕು. ಜೀವರಕ್ಷಕ ಸಾಮಾಗ್ರಿಗಳು ಸಿದ್ದವಾಗಿರಬೇಕೆಂದು ಸೂಚಿಸಿದರು. ಮಳೆಗಾಲದಲ್ಲಿ ಅನೇಕ ಕಡೆಗಳಲ್ಲಿ ಮರಗಳು ರಸ್ತೆಗಡ್ಡವಾಗಿ ಬೀಳುವ ಸಂದರ್ಭ ಬದಲಿ ರಸ್ತೆ ಮಾರ್ಗಗಳನ್ನು ಗುರುತಿಸುವಂತೆಯೂ ಪೊಲೀಸ್ ವರಿಷ್ಠಾಧಿಕಾರಿ ಸೂಚಿಸಿದರು.

<><><><>

ಮೇ ಹಾಗೂ ಜೂನ್ ಮಾಹೆಯಲ್ಲಿ ವಿತರಿಸಬೇಕಾದ ಪಡಿತರ ಅಕ್ಕಿಯನ್ನು ಮೇ ತಿಂಗಳಲ್ಲಿ ಒಂದೇ ಬಾರಿಗೆ ಹಂಚಿಕೆ ಮಾಡಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ತಿಳಿಸಿದ್ದಾರೆ. ಮೇ ಹಾಗೂ ಜೂನ್ ತಿಂಗಳ ಪಡಿತರವನ್ನು ಒಟ್ಟಿಗೆ ಪಡೆಯುವ ಸಂದರ್ಭದಲ್ಲಿ, ಪಡಿತರ ಚೀಟಿದಾರರು ತಾಂತ್ರಿಕ ದಾಖಲೀಕರಣಕ್ಕಾಗಿ ಎರಡು ಬಾರಿ ಪ್ರತ್ಯೇಕವಾಗಿ ಬಯೋಮೆಟ್ರಿಕ್ ನೀಡುವುದು ಕಡ್ಡಾಯವಾಗಿದೆ ಎಂದು ಅವರು ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>